Akashvani: Bangalore
National Bulletin In Kannada
16.07.2026: 13.10hrs
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
16.07.2026: 13.10hrs
**********

**ಮುಖ್ಯಾಂಶಗಳು :**

1. ದೇಶದ ಮೊದಲ ಹೈಡ್ರೋಜನ್ ರೈಲು ಹಾಗೂ ಅಮೃತ್ ಭಾರತ್ ಯೋಜನೆಯಡಿ ಪುನರಾಭಿವೃದ್ಧಿಗೊಂಡ ೭೫ ರೈಲು ನಿಲ್ದಾಣ ನಾಳೆ ಪ್ರಧಾನಿ ಅವರಿಂದ ಲೋಕಾರ್ಪಣೆ
2. ಅತ್ಯಾಧುನಿಕ ಮೂಲಸೌಕರ್ಯ ಅಭಿವೃದ್ಧಿಗೊಂಡ ಆರ್ಥಿಕತೆಯ ಹೆಗ್ಗುರುತು - ಸಚಿವ ರಾಜನಾಥ್ ಸಿಂಗ್
3. ಮಾಪನ ಗುಣಮಟ್ಟ ವಿಷಯದಲ್ಲಿ ಸಮನ್ವಯ ರೂಪಿಸಲು ೧೧ ಬ್ರಿಕ್ಸ್ ಸದಸ್ಯ ರಾಷ್ಟ್ರಗಳ ನಡುವೆ ಒಡಂಬಡಿಕೆ - ಸಚಿವ ಪ್ರಲ್ಹಾದ್ ಜೋಶಿ
4. ಏಕದಿನ ಪಂದ್ಯಗಳ ಕ್ರಿಕೆಟ್ ಸರಣಿ ;  ೨ನೇ ಪಂದ್ಯದಲ್ಲಿಂದು ಭಾರತ-ಇಂಗ್ಲೆಂಡ್ ಮುಖಾಮುಖಿ

**************

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು, ನಾಳೆ ಹರಿಯಾಣ, ಚಂಡೀಗಢ ಮತ್ತು ಪಂಜಾಬ್‌ಗೆ ಭೇಟಿ ನೀಡಲಿದ್ದಾರೆ. ಹರಿಯಾಣದ ಜಿಂದ್ ರೈಲು ನಿಲ್ದಾಣದಲ್ಲಿ ಭಾರತದ ಮೊದಲ ಹೈಡ್ರೋಜನ್ ರೈಲಿಗೆ ಪ್ರಧಾನಿ ಚಾಲನೆ ನೀಡಲಿದ್ದಾರೆ. ಹೈಡ್ರೋಜನ್ ಇಂಧನ ಕೋಶ ತಂತ್ರಜ್ಞಾನ ಆಧಾರಿತ ಈ ರೈಲು ಜಿಂದ್ ಮತ್ತು ಸೋನಿಪತ್ ನಡುವೆ ಸಂಚರಿಸಲಿವೆ. ಅತ್ಯಾಧುನಿಕ ರೈಲ್ವೆ ಎಂಜಿನಿಯರಿಂಗ್ ಬಳಸಿ ಸಂಪೂರ್ಣ ಸ್ವದೇಶಿ ತಂತ್ರಜ್ಞಾನದೊಂದಿಗೆ ಈ ರೈಲನ್ನು ವಿನ್ಯಾಸಗೊಳಿಸಲಾಗಿದ್ದು, ಇದು ಶೂನ್ಯ ಇಂಗಾಲ ಹೊರಸೂಸಲಿದೆ. ಆ ನಂತರ ಪ್ರಧಾನಿ ನರೇಂದ್ರ ಮೋದಿ, ಜಿಂದ್‌ನ ಏಕಲವ್ಯ ಕ್ರೀಡಾಂಗಣದಲ್ಲಿ ಸುಮಾರು ೧೪ ಸಾವಿರದ ೭೦೦ ಕೋಟಿ ರೂಪಾಯಿ ಮೌಲ್ಯದ ವಿವಿಧ ಅಭಿವೃದ್ಧಿ ಯೋಜನೆಗಳನ್ನು ರಾಷ್ಟ್ರಕ್ಕೆ ಸಮರ್ಪಿಸಲಿದ್ದಾರೆ. ಪ್ರಧಾನಿ ಅವರು ಮಧ್ಯಾಹ್ನ ಚಂಡೀಗಢಕ್ಕೆ ಭೇಟಿ ನೀಡಲಿದ್ದು, ಅಲ್ಲಿ ಆರೋಗ್ಯ, ರಕ್ಷಣೆ, ಶಿಕ್ಷಣ ಮತ್ತು ರಸ್ತೆ ಮೂಲಸೌಕರ್ಯ ಸೇರಿದಂತೆ ಆರು ಸಾವಿರದ ೬೦೦ ಕೋಟಿ ರೂಪಾಯಿಗಳಿಗೂ ಅಧಿಕ ಮೌಲ್ಯದ ವಿವಿಧ ಅಭಿವೃದ್ಧಿ ಯೋಜನೆಗಳಿಗೆ ಶಿಲಾನ್ಯಾಸ ನೆರವೇರಿಸಲಿದ್ದಾರೆ. ಚಂಡೀಗಢದ ಸ್ನಾತಕೋತ್ತರ

ವೈದ್ಯಕೀಯ ಶಿಕ್ಷಣ ಮತ್ತು ಸಂಶೋಧನಾ ಸಂಸ್ಥೆ ಯಲ್ಲಿ ಆಧುನಿಕ ಮಾತೃ ಮತ್ತು ಮಕ್ಕಳ ಕೇಂದ್ರ ಹಾಗೂ ಅತ್ಯಾಧುನಿಕ ನರವಿಜ್ಞಾನ ಕೇಂದ್ರವನ್ನು ಪ್ರಧಾನಿ ಉದ್ಘಾಟಿಸುವರು. ನಂತರ ಪ್ರಧಾನಿ ಅವರು ಜಲಂಧರ್‌ಗೆ ಭೇಟಿ ನೀಡಲಿದ್ದು, ಸಂಪರ್ಕ ಬಲವರ್ಧನೆ ಮತ್ತು ಆರ್ಥಿಕ ಅಭಿವೃದ್ಧಿ ವೇಗಗೊಳಿಸುವ ಗುರಿ ಹೊಂದಿರುವ ಐದು ಸಾವಿರದ ೪೭೦ ಕೋಟಿ ರೂಪಾಯಿಗಳಿಗೂ ಅಧಿಕ ಮೌಲ್ಯದ ಬಹು ಅಭಿವೃದ್ಧಿ ಯೋಜನೆಗಳನ್ನು ಉದ್ಘಾಟಿಸಲಿದ್ದಾರೆ. ಇದೇ ವೇಳೆ ಅವರು ಅಮೃತ ಭಾರತ ನಿಲ್ದಾಣ ಯೋಜನೆಯಡಿ ಜಲಂಧರ್ ಕಂಟೋನ್ಮೆಂಟ್ ಸೇರಿ ೭೫ ಪುನರಾಭಿವೃದ್ಧಿಗೊಂಡ ರೈಲು ನಿಲ್ದಾಣಗಳನ್ನು ಲೋಕಾರ್ಪಣೆ ಮಾಡುವರು.

**************

ಅತ್ಯಾಧುನಿಕ ಮೂಲಸೌಕರ್ಯ ಯಾವುದೇ ಅಭಿವೃದ್ಧಿಗೊಂಡ ನಾಗರಿಕತೆಯ ಹೆಗ್ಗುರುತಾಗಿದೆ ಎಂದು ರಕ್ಷಣಾ ಸಚಿವ ರಾಜನಾಥ್ ಸಿಂಗ್ ಹೇಳಿದ್ದಾರೆ.ಅವರು ದೆಹಲಿಯಲ್ಲಿಂದು ಗಡಿ ರಸ್ತೆ ಸಂಸ್ಥೆ-ಬಿಆರ್‌ಒದ ತಾಂತ್ರಿಕ ಗೋಷ್ಠಿಯನ್ನುದ್ದೇಶಿಸಿ ಮಾತನಾಡಿ, ಇಂದು ನಿರ್ಮಿಸುತ್ತಿರುವ ಮೂಲಸೌಕರ್ಯ ಮುಂಬರುವ ವರ್ಷಗಳ ದೇಶದ ನಾಗರಿಕತೆಯನ್ನು ವ್ಯಾಖ್ಯಾನಿಸುತ್ತದೆ ಎಂದರು. ರೋಹ್ತಾಂಗ್ ನಲ್ಲಿ ನಿರ್ಮಿಸುತ್ತಿರುವ ಅಟಲ್ ಸುರಂಗ ಮಾರ್ಗ ಉಮ್ಲಿಂಗ್ ಲಾ ನಲ್ಲಿ ಮೋಟಾರು ವಾಹನ ಸಂಚಾರಕ್ಕೆ ಸೂಕ್ತ ರಸ್ತೆ ನಿರ್ಮಾಣ, ೧೩ ಸಾವಿರ ಅಡಿ ಎತ್ತರದಲ್ಲಿ ಸೇಲಾ ಸುರಂಗ ನಿರ್ಮಾಣ ಇವು ಬಿಆರ್‌ಒ ಸಂಸ್ಥೆಯ ಸಾಮರ್ಥ್ಯವನ್ನು ಬಿಂಬಿಸುತ್ತವೆ. ಈ ಸಾಧನೆ ಎಂಜನಿಯರಿಂಗ್ ತಂತ್ರಜ್ಞಾನದ ಚಮತ್ಕಾರಗಳು ಎಂದು ಬಣ್ಣಿಸಿದ ಸಚಿವರು ಸಂಸ್ಥೆಯ ಸಿಬ್ಬಂದಿಯ ಪರಿಶ್ರಮ, ಬದ್ಧತೆ ಹಾಗೂ ಹೊಸ ತಂತ್ರಜ್ಞಾನವನ್ನು ಅಳವಡಿಸಿಕೊಳ್ಳುವ ಅವರ ಮನೋಭಾವದಿಂದ ಇಂತಹ ಸಾಧನೆ ಮಾಡಲು ಸಾಧ್ಯವಾಗಿದೆ ಎಂದು ಪ್ರಶಂಸಿಸಿದ್ದಾರೆ.

**************

ಮುಂಬರುವ ಸಂಸತ್ತಿನ ಮುಂಗಾರು ಅಧಿವೇಶನದಲ್ಲಿ ಸರ್ಕಾರದ ಕಾರ್ಯಸೂಚಿಯನ್ನು ಅಂತಿಮಗೊಳಿಸುವ ಸಲುವಾಗಿ ನಾಳೆ ದೆಹಲಿಯಲ್ಲಿ ಎನ್‌ಡಿಎ ಸಚಿವರನ್ನು ಒಳಗೊಂಡಂತೆ ರಕ್ಷಣಾ ಸಚಿವ ರಾಜನಾಥ್ ಅಧ್ಯಕ್ಷತೆಯಲ್ಲಿ ಉನ್ನತ ಮಟ್ಟದ ಸಂಸದೀಯ ಸಭೆ ನಡೆಯಲಿದೆ. ಸಂಸತ್ ಅಧಿವೇಶನ ಇದೇ ೨೦ ರಿಂದ ಆರಂಭವಾಗಲಿದ್ದು, ಆಗಸ್ಟ್ ೧೩ರಂದು ಮುಕ್ತಾಯಗೊಳ್ಳಲಿದೆ. ಸರ್ಕಾರ ಸದನದ ಕಲಾಪವನ್ನು ಸುಗಮವಾಗಿ ನಡೆಸಲು ಪ್ರತಿಪಕ್ಷಗಳ ಸಹಕಾರ ಕೋರಲು ಇದೇ ೧೯ರಂದು ಸರ್ವಪಕ್ಷಗಳ ಸಭೆಯನ್ನು ಕರೆದಿದೆ. ಮುಂಗಾರು ಅಧಿವೇಶನದಲ್ಲಿ ಹಲವು ಮಹತ್ವದ ಮಸೂದೆಗಳನ್ನು ಮಂಡಿಸಿ, ಅಂಗೀಕಾರ ಪಡೆಯಲು ಸರ್ಕಾರ

ಸಿದ್ಧತೆ ನಡೆಸಿದೆ. ಏಕಕಾಲದಲ್ಲಿ ವಿಧಾನಸಭೆ ಮತ್ತು ಲೋಕಸಭೆ ಚುನಾವಣೆಗಳಲ್ಲಿ ನಡೆಸುವ ಕುರಿತಾದ ೧೨೯ನೇ ಸಾಂವಿಧಾನಿಕ ತಿದ್ದುಪಡಿ ಮಸೂದೆಯನ್ನು ಪರಿಶೀಲಿಸುತ್ತಿರುವ ಜಂಟಿ ಸಂಸದೀಯ ಸಮಿತಿ ನಾಳೆ ತನ್ನ ವರದಿಯನ್ನು ಸರ್ಕಾರಕ್ಕೆ ಸಲ್ಲಿಸುವ ಸಾಧ್ಯತೆಯಿದೆ.

**************

ಭಾರತವು ತನ್ನ ೨೦೨೬ರ ಬ್ರಿಕ್ಸ್ ಅಧ್ಯಕ್ಷತೆಯ ಭಾಗವಾಗಿ, ಬ್ರಿಕ್ಸ್ ಸದಸ್ಯ ರಾಷ್ಟ್ರಗಳ ರಾಷ್ಟ್ರೀಯ ಪ್ರಮಾಣೀಕರಣ ಸಂಸ್ಥೆಗಳ ಮುಖ್ಯಸ್ಥರ ೫ನೇ ಸಭೆ ಬೆಂಗಳೂರಿನಲ್ಲಿ ಇಂದು ಆರಂಭವಾಗಿದೆ. ಎರಡು ದಿನಗಳ ಕಾಲ ನಡೆಯುವ ಸಭೆಯಲ್ಲಿ ಕೇಂದ್ರ ಗ್ರಾಹಕ ವ್ಯವಹಾರಗಳು, ಆಹಾರ ಮತ್ತು ಸಾರ್ವಜನಿಕ ವಿತರಣೆ ಮತ್ತು ಹೊಸ ಮತ್ತು ನವೀಕರಿಸಬಹುದಾದ ಇಂಧನ ಸಚಿವ ಪ್ರಲ್ಹಾದ್ ಜೋಶಿ ಇಂದು 'ಬ್ರಿಕ್ಸ್ ಸದಸ್ಯ ರಾಷ್ಟ್ರಗಳ ಅಡಿಯಲ್ಲಿ ಪ್ರಮಾಣೀಕರಣದಲ್ಲಿ ಸಹಕಾರ' ಕುರಿತ ಗೋಷ್ಠಿಯನ್ನು ಉದ್ಘಾಟಿಸಿದರು. ಈ ವೇಳೆ ಮಾತನಾಡಿದ ಅವರು, ಮಾಪನ ಗುಣಮಟ್ಟ ವಿಷಯದಲ್ಲಿ ಸಮನ್ವಯ ರೂಪಿಸಲು ೧೧ ರಾಷ್ಟ್ರಗಳು ಒಡಂಬಡಿಕೆಗೆ ಸಹಿ ಹಾಕಲಿವೆ. ಈ ಒಡಂಬಡಿಕೆಯಿಂದ ಬ್ರಿಕ್ಸ್ ರಾಷ್ಟ್ರಗಳ ನಡುವೆ ವ್ಯಾಪಾರ ವೃದ್ಧಿಯಾಗುವುದಲ್ಲದೇ ಉತ್ತಮ ಗುಣಮಟ್ಟದ ಉತ್ಪನ್ನಗಳು ತಯಾರಾಗಲು ಅನುಕೂಲವಾಗುತ್ತದೆ ಎಂದರು. ಸಭೆಯಲ್ಲಿ ಬಿಐಎಸ್‌ನ ಮಹಾ ನಿರ್ದೇಶಕ ಸಂಜಯ್ ಗರ್ಗ್ ಹಾಗೂ ಗ್ರಾಹಕ ವ್ಯವಹಾರಗಳ ಇಲಾಖೆಯ ಕಾರ್ಯದರ್ಶಿ ನಿಧಿ ಖರೆ ಮತ್ತಿತರರು ಪಾಲ್ಗೊಂಡಿದ್ದರು.

**************

ಜಾಗತಿಕ ಪೂರೈಕೆ ಸರಣಿ ವ್ಯತ್ಯಯ ಸೇರಿದಂತೆ ಸದ್ಯ ಎದುರಾಗುತ್ತಿರುವ ಆರ್ಥಿಕ ಸವಾಲುಗಳನ್ನು ಹತ್ತಿಕ್ಕಲು ಬಿಮ್ಸ್‌ಸ್ಟೆಕ್ ಸದಸ್ಯ ರಾಷ್ಟ್ರಗಳ ನಡುವೆ ನಿಕಟ ಸಹಕಾರ ಅತ್ಯಗತ್ಯ ಎಂದು ರಾಷ್ಟ್ರೀಯ ಭದ್ರತಾ ಸಲಹೆಗಾರ ಅಜಿತ್ ದೋವಲ್ ಪ್ರತಿಪಾದಿಸಿದ್ದಾರೆ.

ಧ್ವನಿ : ಅಜಿತ್ ದೋವಲ್ (೨೭ ಸೆಕೆಂಡ್‌ಗಳು)

ದೆಹಲಿಯಲ್ಲಿಂದು ನಡೆದ ಬಿಮ್ಸ್‌ಸ್ಟೆಕ್ ರಾಷ್ಟ್ರಗಳ ರಾಷ್ಟ್ರೀಯ ಭದ್ರತಾ ಪಡೆಗಳ ಮುಖ್ಯಸ್ಥರ ೫ನೇ ಸಭೆಯನ್ನುದ್ದೇಶಿಸಿ ಮಾತನಾಡಿದ ಅವರು, ಜಾಗತಿಕ ಪೂರೈಕೆ ಸರಣಿ ವ್ಯತ್ಯಯದಿಂದ ಎಲ್ಲಾ ದೇಶಗಳು ಆರ್ಥಿಕ ಸಂಕಷ್ಟಕ್ಕೆ ಸಿಲುಕಿವೆ. ಹಾಗಾಗಿ ಅದರಿಂದ ಹೊರಬರಲು ಸೂಕ್ತ ಪರಿಹಾರಗಳನ್ನು ಕಂಡುಕೊಳ್ಳಲು ಸದಸ್ಯ ರಾಷ್ಟ್ರಗಳ ನಡುವೆ ಪರಸ್ಪರ ಸಂವಾದ ಮತ್ತು ಸಹಭಾಗಿತ್ವ ತುರ್ತಾಗಿ ಆಗಬೇಕಿದೆ ಎಂದು ಹೇಳಿದರು.

**************

ಬೆಲ್ಜಿಯಂ ಪ್ರವಾಸದಲ್ಲಿರುವ ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಪಿಯೂಷ್ ಗೋಯಲ್ ಬ್ರುಸೆಲ್ಸ್‌ನಲ್ಲಿಂದು ಭಾರತೀಯ ಕೈಗಾರಿಕಾ ಒಕ್ಕೂಟ, ಭಾರತೀಯ ವಾಣಿಜ್ಯ ಮತ್ತು ಕೈಗಾರಿಕಾ ಮಹಾ ಒಕ್ಕೂಟ ಹಾಗೂ ಅಸೋಚಾಮ್‌ನ ವಾಣಿಜ್ಯ ಪ್ರತಿನಿಧಿಗಳೊಂದಿಗೆ ಸಂವಾದ ನಡೆಸಿದರು.ಈ ಕುರಿತು ತಮ್ಮ ಮಾಧ್ಯಮ ಪೋಸ್ಟ್‌ನಲ್ಲಿ ವಿವರ ಹಂಚಿಕೊಂಡಿರುವ ಅವರು, ನಿಯೋಗದೊಂದಿಗೆ ಹೇಗೆ ಭಾರತೀಯ-ಐರೋಪ್ಯ ಒಕ್ಕೂಟದ ಮುಕ್ತ ವ್ಯಾಪಾರ ಒಪ್ಪಂದ ದೇಶದ ಉದ್ಯಮಿಗಳಿಗೆ ಅವಕಾಶಗಳ ಬಾಗಿಲನ್ನು ತೆರೆಯುತ್ತದೆ. ಹಾಗೂ ಇದರಿಂದ ಭಾರತದ ವಾಣಿಜ್ಯೋದ್ಯಮಿಗಳು, ಎಂಎಸ್‌ಎಂಇ ಗಳು ಹಾಗೂ ಜನರಿಗೆ ಅನುಕೂಲಗಳಾಗಲಿವೆ ಎಂಬ ಕುರಿತು ಚರ್ಚೆ ನಡೆಸಲಾಯಿತು ಎಂದು ಹೇಳಿದ್ದಾರೆ.

**************

ಪೆಟ್ರೋಲ್, ಡೀಸೆಲ್ ಮತ್ತು ವೈಮಾನಿಕ ಇಂಧನ-ಎಟಿಎಫ್ ಮೇಲಿನ ವಿಶೇಷ ಹೆಚ್ಚುವರಿ ಅಬಕಾರಿ ಸುಂಕವನ್ನು ಕೇಂದ್ರ ಸರ್ಕಾರ ಪರಿಷ್ಕರಿಸಿದೆ. ಇಂಧನ ರಫ್ತು ತೆರಿಗೆಗಳ ಪಾಕ್ಷಿಕ ಪರಿಶೀಲನೆಯ ಭಾಗವಾಗಿ ಸುಂಕವನ್ನು ಪರಿಷ್ಕರಿಸಲಾಗಿದ್ದು, ಅದರಂತೆ ಡೀಸೆಲ್ ಮೇಲಿನ ಸುಂಕ ಪ್ರತಿ ಲೀಟರ್‌ಗೆ ೧೫.೫೦ ರೂಪಾಯಿ ಹೆಚ್ಚಿಸಲಾಗಿದೆ. ಎಟಿಎಫ್ ಮೇಲಿನ ಸುಂಕವನ್ನು ಪ್ರತಿ ಲೀಟರ್‌ಗೆ ೧೪.೫೦ ರೂಪಾಯಿ ಹೆಚ್ಚಿಸಲಾಗಿದ್ದು, ಪೆಟ್ರೋಲ್ ಮೇಲಿನ ಸುಂಕವನ್ನು ಪ್ರತಿ ಲೀಟರ್‌ಗೆ ೨.೫೦ ರೂಪಾಯಿ ಇಳಿಕೆ ಮಾಡಲಾಗಿದೆ. ಹಣಕಾಸು ಸಚಿವಾಲಯ ಪರಿಷ್ಕೃತ ದರಗಳ ಅಧಿಸೂಚನೆ ಹೊರಡಿಸಿದ್ದು, ಆ ದರಗಳು ಇಂದಿನಿಂದಲೇ ಜಾರಿಗೆ ಬಂದಿವೆ. ಆದರೆ ದೇಶೀಯ ಬಳಕೆಯ ಪೆಟ್ರೋಲ್ ಮತ್ತು ಡೀಸೆಲ್ ಮೇಲಿನ ಅಬಕಾರಿ ಸುಂಕದಲ್ಲಿ ಯಾವುದೇ ಬದಲಾವಣೆಯನ್ನು ಮಾಡಲಾಗಿಲ್ಲ. ಪಶ್ಚಿಮ ಏಷ್ಯಾ ಬಿಕ್ಕಟ್ಟಿನ ಹಿನ್ನೆಲೆಯಲ್ಲಿ ಪೆಟ್ರೋಲಿಯಂ ಉತ್ಪನ್ನಗಳ ರಫ್ತು ನಿರುತ್ತೇಜನಗೊಳಿಸಲು ಕೇಂದ್ರ ಸರ್ಕಾರ ಕಳೆದ ಮಾರ್ಚ್ ೨೭ ರಿಂದ ಜಾರಿಗೆ ಬರುವಂತೆ ಪೆಟ್ರೋಲ್, ಡೀಸೆಲ್ ಮತ್ತು ಎಟಿಎಫ್ ಮೇಲಿನ ಹೆಚ್ಚುವರಿ ಅಬಕಾರಿ ಸುಂಕವನ್ನು ಹೆಚ್ಚಳ ಮಾಡಿದೆ.

**************

ಪುರುಷರ ಮೂರು ಏಕದಿನ ಪಂದ್ಯಗಳ ಸರಣಿಯ ಎರಡನೇ ಏಕದಿನ ಕ್ರಿಕೆಟ್ ಪಂದ್ಯದಲ್ಲಿ ಭಾರತ ಮತ್ತು ಇಂಗ್ಲೆಂಡ್ ಇಂದು ಕಾರ್ಡಿಫ್‌ನ ಸೋಫಿಯಾ ಗಾರ್ಡನ್‌ನಲ್ಲಿ ಮುಖಾಮುಖಿಯಾಗಲಿವೆ. ಪಂದ್ಯ ಭಾರತೀಯ ಕಾಲಮಾನ ಸಂಜೆ ೫.೩೦ಕ್ಕೆ ಆರಂಭವಾಗಲಿದೆ. ಇದಕ್ಕೂ ಮೊದಲು

ಮಂಗಳವಾರ ಬರ್ಮಿಂಗ್ ಹ್ಯಾಮ್‌ನ ಎಡ್ಜ್ ಬಾಸ್ಟನ್‌ನಲ್ಲಿ ನಡೆದ ಮೊದಲ ಏಕದಿನ ಪಂದ್ಯದಲ್ಲಿ ಭಾರತ ತಂಡವು ಆತಿಥೇಯ ಇಂಗ್ಲೆಂಡ್ ತಂಡವನ್ನು ೬ ವಿಕೆಟ್‌ಗಳಿಂದ ಸೋಲಿಸಿತು. ಮೂರನೇ ಏಕದಿನ ಪಂದ್ಯವು ಭಾನುವಾರ ಲಂಡನ್‌ನ ಲಾರ್ಡ್ಸ್ ಕ್ರಿಕೆಟ್ ಮೈದಾನದಲ್ಲಿ ನಡೆಯಲಿದೆ.

**************

ಎರಡೂ ಬಾರಿಯ ಒಲಿಂಪಿಕ್ ಪದಕ ವಿಜೇತೆ ಪಿ.ವಿ.ಸಿಂಧು, ಚೀನಾದ ೫ನೇ ಶ್ರೇಯಾಂಕದ ಆಟಗಾರ್ತಿ ಹಾನ್ ಯೂ ಅವರನ್ನು ನೇರ ಸೆಟ್‌ಗಳಲ್ಲಿ ಮಣಿಸಿ ಜಪಾನ್ ಸೂಪರ್ ೭೫೦ ಬ್ಯಾಡ್ಮಿಂಟನ್ ಟೂರ್ನಿಯ ಕ್ವಾರ್ಟರ್ ಫೈನಲ್ ಪ್ರವೇಶಿಸಿದ್ದಾರೆ. ಪಿ.ವಿ.ಸಿಂಧು, ೨ನೇ ಸುತ್ತಿನ ಸ್ಪರ್ಧೆಯಲ್ಲಿ ೨೧-೧೬, ೨೧-೧೪ರಿಂದ ಮಣಿಸಿ, ಮುಂದಿನ ಹಂತ ಪ್ರವೇಶಿಸಿದರು. ಸಧ್ಯ ಟೂರ್ನಿಯಲ್ಲಿ ಉಳಿದಿರುವ ಏಕೈಕ ಆಟಗಾರ್ತಿ ಪಿ.ವಿ.ಸಿಂಧು ಆಗಿದ್ದಾರೆ.

*******END*******